**All India Radio: Bangalore**
**National Bulletin In Kannada**
**02.02.2026 1935 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**02.02.2026 1935 hrs**
********************

ಮುಖ್ಯಾಂಶಗಳು

೧. ಉಭಯ ಸದನಗಳಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ

೨. ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆ; ೩೫ ಸಾವಿರಕ್ಕೂ ಹೆಚ್ಚು ನೋಂದಣಿ

೩. ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬ಕ್ಕೆ ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವೀಯ ಚಾಲನೆ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಪ್; ಯುಎಸ್ಎ ತಂಡಕ್ಕೆ ೨೩೯ ರನ್ ಗಳ ಗುರಿ ನೀಡಿದ ಭಾರತ ಎ ತಂಡ ಕೆಯಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಕೇಂದ್ರ ತೋಟಗಾರಿಕೆ ರೆ; ಯುಎಸ್ಎ ತಂಡಕ್ಕೆ ೨೩೯ ರನ್ ಗಳ ಗುರಿ ನೀಡಿದ ಭಾರತ ಎ ತಂಡ

****************

ಸಂಸತ್ತಿನ ಉಭಯ ಸದನಗಳನ್ನು ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಇಂದು ಲೋಕಸಭೆಯಲ್ಲಿ ಚರ್ಚೆ ನಡೆಯಿತು.

ಚರ್ಚೆಗೆ ಒಟ್ಟು ೧೮ ಗಂಟೆಗಳ ಸಮಯವನ್ನು ನಿಗದಿಪಡಿಸಲಾಗಿದೆ. ಈ ಕುರಿತು ಲೋಕಸಭೆಯಲ್ಲಿಂದು ಪ್ರಸ್ತಾವನೆ ಮಂಡಿಸಿದ ಕೇಂದ್ರ ಸಚಿವ ಸರ್ಬಾನಂದ ಸೋನೊವಾಲ್, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣವು ಗಮನಾರ್ಹವಾಗಿದ್ದು, ದೇಶದ ಭವಿಷ್ಯಕ್ಕೆ ಸ್ಫೂರ್ತಿದಾಯಕ ದೃಷ್ಟಿಕೋನ ಒದಗಿಸಿದೆ ಎಂದು ಹೇಳಿದರು.

ಇದು ಸಾಮಾಜಿಕ ನ್ಯಾಯ, ಎಲ್ಲರನ್ನೂ ಒಳಗೊಂಡ ಬೆಳವಣಿಗೆ ಮತ್ತು ವಿಕಸಿತ ಭಾರತವನ್ನು ನಿರ್ಮಿಸುವ ಕೇಂದ್ರ ಸರ್ಕಾರದ ಬದ್ಧತೆಯ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ. ಸಬ್ ಕಾ ಸಾಥ್- ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್ ಮತ್ತು ಸಬ್ ಕಾ ಪ್ರಯಾಸ್ ಎಂಬ ಮಂತ್ರವು ಕೇವಲ ಘೋಷಣೆಯಲ್ಲ. ಬದಲಾಗಿ ಸರ್ಕಾರಕ್ಕೆ ಮಾರ್ಗದರ್ಶಿ ತತ್ವವಾಗಿದೆ ಎಂದು ತಿಳಿಸಿದರು.

ಸರ್ಬಾನಂದ ಸೋನೊವಾಲ್ ಅವರು ಮಂಡಿಸಿದ ಪ್ರಸ್ತಾವವನ್ನು ಸಂಸದ ತೇಜಸ್ವಿ ಸೂರ್ಯ ಅನುಮೋದಿಸಿದರು. ಈ ವೇಳೆ ಮಾತನಾಡಿದ ಅವರು, ಕಳೆದ ೧೨ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಜನರ ಆಕಾಂಕ್ಷೆಗಳನ್ನು ಈಡೇರಿಸಿದೆ. ದೇಶದ ಯುವಕರನ್ನು ಭವಿಷ್ಯದ ಚಾಲಕರನ್ನಾಗಿ ಸಜ್ಜುಗೊಳಿಸಲಾಗುತ್ತಿದೆ ಎಂದು ಹೇಳಿದರು.

****************

ಸಂಸತ್ತಿನ ಉಭಯ ಸದನಗಳ ಜಂಟಿ ಸದನವನ್ನು ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆಯನ್ನು ರಾಜ್ಯಸಭೆ ಕೈಗೆತ್ತಿಕೊಂಡಿದೆ. ಚರ್ಚೆಗೆ ಒಟ್ಟು ೧೬ ಗಂಟೆಗಳ ಸಮಯವನ್ನು ನಿಗದಿಪಡಿಸಲಾಗಿದೆ.

ಈ ಕುರಿತು ನಾಮನಿರ್ದೇಶಿತ ಸದಸ್ಯ ಸಿ.ಸದಾನಂದನ್ ಮಾಸ್ಟರ್ ಅವರು ಪ್ರಸ್ತಾವನೆ ಮಂಡಿಸಿದರು. ಈ ವೇಳೆ ಮಾತನಾಡಿದ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಭಾಷಣದಲ್ಲಿ ವಿಕಸಿತ ಭಾರತದತ್ತ ಪ್ರಯಾಣದ ಸ್ಪಷ್ಟ ಮತ್ತು ಆತ್ಮವಿಶ್ವಾಸದ ದೃಷ್ಟಿಕೋನವನ್ನು ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಮೊದಲ ದಿನದಿಂದಲೂ ಎನ್‌ಡಿಎ ಸರ್ಕಾರವು ಸಾಮಾಜಿಕ ನ್ಯಾಯ ಮತ್ತು ಬಡತನ ನಿರ್ಮೂಲನೆಯ ಬಗ್ಗೆ ಬಹಳ ಸ್ಪಷ್ಟವಾಗಿದೆ. ಇದರಿಂದಾಗಿ ಕಳೆದ ದಶಕದಲ್ಲಿ ೨೫ ಕೋಟಿ ಜನರನ್ನು ಬಡತನದಿಂದ ಹೊರತರಲು ಸಾಧ್ಯವಾಯಿತು. ಇಂದು ಸುಮಾರು ೯೫ ಕೋಟಿ ಭಾರತೀಯರು ಸಾಮಾಜಿಕ ಭದ್ರತೆಯನ್ನು ಹೊಂದಿದ್ದಾರೆ ಎಂದು ಅವರು ತಿಳಿಸಿದರು.

ಪ್ರಸ್ತಾವವನ್ನು ಅನುಮೋದಿಸಿದ ರಾಜ್ಯಸಭೆ ಸದಸ್ಯೆ ಡಾ.ಮೇಧಾ ವಿಶ್ರಮ್ ಕುಲಕರ್ಣಿ, ರಾಷ್ಟ್ರಪತಿಗಳ ಭಾಷಣವು ಭಾರತದ ನಿರಂತರ ಪ್ರಗತಿಯನ್ನು ಪ್ರತಿಬಿಂಬಿಸುತ್ತದೆ. ಭಾರತದ ಆರ್ಥಿಕತೆಯು ಬಲಿಷ್ಠವಾಗಿದೆ. ಬೆಳವಣಿಗೆ ದರವು ಶೇಕಡ ೭.೨ಕ್ಕೆ ಏರಿಕೆಯಾಗಿದೆ. ಜಿಎಸ್‌ಟಿ ಆದಾಯ ಹೆಚ್ಚಾಗಿದೆ. ಕಳೆದ ಕೆಲವು ವರ್ಷಗಳಿಂದ ೩ ಕೋಟಿ ಹೊಸ ತೆರಿಗೆದಾರರು ಸೇರ್ಪಡೆಯಾಗಿದ್ದಾರೆ ಎಂದು ಹೇಳಿದರು.

*****************

ಲೋಕಸಭೆಯಲ್ಲಿಂದು ರಾಷ್ಟ್ರಪತಿ ಭಾಷಣದ ಮೇಲಿನ ವಂದನಾ ನಿರ್ಣಯದ ವೇಳೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ನೀಡಿದ ಹೇಳಿಕೆಯನ್ನು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಟೀಕಿಸಿದ್ದಾರೆ.

ರಾಹುಲ್ ಗಾಂಧಿ ಅವರು ಸದನದ ನಿಯಮವನ್ನು ಉಲ್ಲಂಘಿಸಿದ್ದಾರೆ. ಅವರು, ದೇಶದ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದ್ದಾರೆ.

ಭಾರತೀಯ ಸಶಸ್ತ್ರಪಡೆಗಳ ವಿರುದ್ಧ ರಾಹುಲ್ ಗಾಂಧಿ ನೀಡಿರುವ ಹೇಳಿಕೆಗಳು ಅನಗತ್ಯ. ನಿಯತಕಾಲಿಕೆಗಳು ಅಥವಾ ಪತ್ರಿಕೆಗಳ ಲೇಖನಗಳನ್ನು ಸಂಸತ್ತಿನಲ್ಲಿ ಉಲ್ಲೇಖಿಸುವಂತಿಲ್ಲ. ಕಾನೂನು ಪ್ರಕಾರವೇ ಸದನದಲ್ಲಿ ಚರ್ಚೆ ನಡೆಸಬೇಕು ಎಂದು ಲೋಕಸಭಾಧ್ಯಕ್ಷರು ಸೂಚಿಸಿದ್ದಾರೆ. ಆದರೆ, ಇದರ ಹೊರತಾಗಿಯೂ ವಿರೋಧ ಪಕ್ಷದ ನಾಯಕರು ಈ ವಿಷಯವನ್ನು ಎತ್ತಿರುವುದು ದುರದುಷ್ಟಕರ ಎಂದು ಹೇಳಿದ್ದಾರೆ.

ಆರಂಭದಿಂದಲೂ ರಾಹುಲ್ ಗಾಂಧಿ ಅವರು ಸದನದ ನಿಯಮಗಳನ್ನು ಉಲ್ಲಂಘಿಸಿದ್ದಾರೆ. ಪುಸ್ತಕದ ಪ್ರಕಟಣೆ ಮತ್ತು ಸತ್ಯಾಸತ್ಯತೆ ಕುರಿತು ಸ್ಪಷ್ಟವಾಗಿ ಉಲ್ಲೇಖಿಸದ ಪುಸ್ತಕದಿಂದ ಅವರು ಹೇಳಿಕೆಯನ್ನು ಉಲ್ಲೇಖಿಸಿದ್ದಾರೆ ಎಂದು ಸಚಿವ ಕಿರಣ್ ರಿಜಿಜು ಆರೋಪಿಸಿದ್ದಾರೆ.

*****************

ಆರ್ಥಿಕ ಸಮೀಕ್ಷೆಯ ದತ್ತಾಂಶವು ಕೃಷಿ ಮತ್ತು ಗ್ರಾಮೀಣ ಪ್ರದೇಶದಲ್ಲಿ ದೇಶದ ಅಭೂತಪೂರ್ವ ಪ್ರಗತಿಯನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ಕೃಷಿ, ರೈತ ಕಲ್ಯಾಣ ಮತ್ತು ಗ್ರಾಮೀಣ ಅಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಐದು ವರ್ಷಗಳಲ್ಲಿ ಕೃಷಿ ಮತ್ತು ಸಂಬಂಧಿತ ವಲಯಗಳು ಸ್ಥಿರ ಬೆಲೆಯಲ್ಲಿ ಸರಾಸರಿ ಶೇಕಡ ೪.೪ರಷ್ಟು ವಾರ್ಷಿಕ ಬೆಳವಣಿಗೆ ದರವನ್ನು ದಾಖಲಿಸಿದೆ. ಇದು ಜಾಗತಿಕ ಸರಾಸರಿಗಿಂತ ಹೆಚ್ಚಾಗಿದೆ ಎಂದು ತಿಳಿಸಿದರು.

೨೦೨೪-೨೫ರ ಹಣಕಾಸು ವರ್ಷದಲ್ಲಿ ದೇಶದ ಆಹಾರ ಧಾನ್ಯ ಉತ್ಪಾದನೆಯು ದಾಖಲೆಯ ೩೫೭.೭೩ ದಶಲಕ್ಷ ಟನ್‌ಗಳನ್ನು ತಲುಪಿದೆ. ಶ್ರೀ ಅನ್ನ ಸೇರಿದಂತೆ ಅಕ್ಕಿ, ಗೋಧಿ, ಮೆಕ್ಕೆಜೋಳ ಮತ್ತು ಇತರೆ ಧಾನ್ಯಗಳ ಸುಧಾರಿತ ಉತ್ಪಾದನೆಯಿಂದ ಇದು ಸಾಧ್ಯವಾಗಿದೆ ಎಂದು ಅವರು ಮಾಹಿತಿ ನೀಡಿದರು.

ಆಹಾರ ಉತ್ಪಾದನೆಯಲ್ಲಿ ಭಾರತ ಇಂದು ಸ್ವಾವಲಂಬಿಯಾಗಿದೆ. ಅಲ್ಲದೇ, ಹಲವಾರು ಬೆಳೆಗಳಲ್ಲಿ ಜಾಗತಿಕವಾಗಿ ಪ್ರಮುಖ ಪಾತ ವಹಿಸುತ್ತಿದೆ. ಕಳೆದ ೧೧ ವರ್ಷಗಳಲ್ಲಿ ದೇಶದ ತೋಟಗಾರಿಕಾ ಉತ್ಪಾದನೆಯು ೨೮೦.೭೦ ದಶಲಕ್ಷ ಟನ್‌ಗಳಿಂದ ೩೬೭.೭೨ ದಶಲಕ್ಷ ಟನ್‌ಗಳಿಗೆ ಏರಿಕೆಯಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

*****************

ಬುಲೆಟ್ ರೈಲು ವಾರಣಾಸಿಯನ್ನು ಪಶ್ಚಿಮ ಬಂಗಾಳದ ಸಿಲಿಗುರಿಗೆ ಸಂಪರ್ಕಿಸುತ್ತದೆ. ಈ ರೈಲನ್ನು ನಂತರ ಅಸ್ಸಾಂಗೆ ವಿಸ್ತರಿಸಲಾಗುವುದು ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಇಂದು ಬಜೆಟ್ ನಂತರದ ವರ್ಚುವಲ್ ಸಂವಾದದಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ರೈಲ್ವೆ ಸಚಿವಾಲಯವು ೨೦೨೬-೨೭ರಲ್ಲಿ ಪಶ್ಚಿಮ ಬಂಗಾಳಕ್ಕೆ ೧೪ ಸಾವಿರದ ೨೦೫ ಕೋಟಿ ರೂಪಾಯಿಗಳನ್ನು ಮಂಜೂರು ಮಾಡಿದೆ ಎಂದು ಮಾಹಿತಿ ನೀಡಿದರು.

ನ್ಯಾಯಾಲಯದ ಆದೇಶದ ಹೊರತಾಗಿಯೂ ಪಶ್ಚಿಮ ಬಂಗಾಳ ಸರ್ಕಾರವು ಕೋಲ್ಕತ್ತಾದ ಚಿನ್ರಿಘಾಟ್‌ನಲ್ಲಿ ಮೆಟ್ರೋ ರೈಲು ಯೋಜನೆಗೆ ಭೂಮಿಯನ್ನು ನೀಡಿಲ್ಲ ಎಂದು ಆರೋಪಿಸಿದ ಅವರು, ರೈಲು ಅಪಘಾತದಿಂದ ಆನೆಗಳ ಸಾವನ್ನು ತಡೆಯಲು, ಎಐ ತಂತ್ರಜ್ಞಾನವನ್ನು ಬಳಸಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

*****************

ಈ ತಿಂಗಳ ೧೬ ರಂದು ನವದೆಹಲಿಯಲ್ಲಿ ಪ್ರಾರಂಭವಾಗುವ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಗೆ ೩೫ ಸಾವಿರಕ್ಕೂ ಹೆಚ್ಚು ನೋಂದಣಿಗಳು ಬಂದಿವೆ.

ಐದು ದಿನಗಳ ಈ ಶೃಂಗಸಭೆಯಲ್ಲಿ ಸುಮಾರು ೨೦ ದೇಶಗಳ ನಾಯಕರು, ವಿವಿಧ ದೇಶಗಳ ಸಚಿವರು ಹಾಗೂ ಪ್ರಮುಖ ಜಾಗತಿಕ ಮತ್ತು ಭಾರತೀಯ ಕಂಪನಿಗಳ ४೦ಕ್ಕೂ ಹೆಚ್ಚು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ತಿಳಿಸಿದೆ.

ನಾವೀನ್ಯಕಾರರು, ಸಂಶೋಧಕರು, ತಂತ್ರಜ್ಞಾನ ಅಧಿಕಾರಿಗಳು ಸೇರಿದಂತೆ ಜಾಗತಿಕ ಕೃತಕಬುದ್ಧಿಮತ್ತೆ ಪರಿಸರ ವ್ಯವಸ್ಥೆಯ ಸುಮಾರು ೫೦೦ ತಜ್ಞರು ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ. ಈ ಶೃಂಗಸಭೆಯು ೭ ಪ್ರಮುಖ ಕಾರ್ಯಕ್ರಮಗಳನ್ನು ಒಳಗೊಂಡಿದ್ದು, ಒಟ್ಟಾರೆ ೩ ಲಕ್ಷಕ್ಕೂ ಹೆಚ್ಚು ಜನರು ಭಾಗವಹಿಸುವ ಸಾಧ್ಯತೆ ಇದೆ.

ಶೃಂಗಸಭೆಯಲ್ಲಿ ೫೦೦ಕ್ಕೂ ಹೆಚ್ಚು ಎಐ ಸ್ಟಾರ್ಟ್‌ಅಪ್‌ಗಳಿಂದ ಪ್ರದರ್ಶನ ಇರಲಿದೆ. ಮುಖ್ಯ ಕಾರ್ಯಕ್ರಮದ ಜೊತೆಗೆ ಸುಮಾರು ೫೦೦ ಅಧಿವೇಶನಗಳನ್ನು ಆಯೋಜಿಸಲಾಗಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

*****************

ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯ ಅವರು ಇಂದು 'ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬' ಕ್ಕೆ ಚಾಲನೆ ನೀಡಿದರು.

ನಾಳೆಯಿಂದ ಪ್ರಾರಂಭವಾಗಲಿರುವ ರಾಷ್ಟ್ರ ವ್ಯಾಪಿ ಯುವ ಕೇಂದ್ರೀತ ಉಪಕ್ರಮವಾದ 'ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬' ದೇಶದ ಯುವಕರಿಂದ ಕೇಂದ್ರ ಬಜೆಟ್‌ನ ತಿಳುವಳಿಕೆಯನ್ನು ಹೆಚ್ಚಿಸುವ ಗುರಿ ಹೊಂದಿದೆ.

ದೇಶಾದ್ಯಂತ ಕಾಲೇಜುಗಳು, ಸಂಸ್ಥೆಗಳು ಮತ್ತು ತರಬೇತಿ ಕೇಂದ್ರಗಳ ಯುವಕರನ್ನು ರಚನಾತ್ಮಕವಾಗಿ ತೊಡಗಿಸುವ ಮೂಲಕ ನಾಗರಿಕರ ದೈನಂದಿನ ಜೀವನದಲ್ಲಿ ಬಜೆಟ್‌ನ ಪರಿಣಾಮದ ಕುರಿತು ತಿಳುವಳಿಕೆ ಹೆಚ್ಚಿಸಲು ಇದು ಪ್ರಯತ್ನಿಸುತ್ತದೆ.

ವಿವಿಧ ಹಂತಗಳಲ್ಲಿ ನಡೆಯುವ ಸ್ಪರ್ಧೆಗಳಲ್ಲಿ ವಿಜೇತರಿಗೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಸಂವಾದದಲ್ಲಿ ಭಾಗವಹಿಸುವ ಅವಕಾಶವೂ ದೊರೆಯಲಿದೆ.

*****************

ಪೆನ್ನೈಯಾರ್ ನದಿ ನೀರಿನ ಹಂಚಿಕೆಗೆ ಸಂಬಂಧಿಸಿದಂತೆ ಕರ್ನಾಟಕ ಮತ್ತು ತಮಿಳುನಾಡಿನ ನಡುವೆ ದೀರ್ಘಕಾಲದಿಂದ ಬಾಕಿ ಇರುವ ವಿವಾದವನ್ನು ಇತ್ಯರ್ಥಪಡಿಸಲು ನ್ಯಾಯ ಮಂಡಳಿಯನ್ನು ಸ್ಥಾಪಿಸುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂಕೋರ್ಟ್ ನಿರ್ದೇಶನ ನೀಡಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಎನ್.ವಿ.ಅಂಜಾರಿಯಾ ಅವರಿದ್ದ ನ್ಯಾಯಪೀಠ, ಕೇಂದ್ರ ಸರ್ಕಾರಕ್ಕೆ ಅಧಿಸೂಚನೆ ಹೊರಡಿಸಿ, ಒಂದು ತಿಂಗಳೊಳಗೆ ಜಲ ನ್ಯಾಯಮಂಡಳಿ ರಚಿಸುವಂತೆ ಸೂಚಿಸಿದೆ.

*****************

ಮುಂಬೈನ ಡಾ. ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಟಿ-೨೦ ವಿಶ್ವಕಪ್ ಪಂದ್ಯದಲ್ಲಿ ಯುಎಸ್‌ಎ ತಂಡದ ವಿರುದ್ಧ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ಎ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೩೮ ರನ್ ಮಾಡಿದೆ.

ಗೆಲುವಿನ ಗುರಿ ಬೆನ್ನತ್ತಿರುವ ಯುಎಸ್‌ಎ ತಂಡ, ಇತ್ತೀಚಿನ ವರದಿ ಬಂದಾಗ, ೮ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೫೯ ರನ್ ಮಾಡಿ ಆಡುತ್ತಿದೆ.

********ಮುಕ್ತಾಯ********